ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ	:	400 (359)
ಮಾನ್ಯ ಸದಸ್ಯರ ಹೆಸರು	:	ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ವಿಷಯ	:	ತಲಕಾಡನ್ನು ಪ್ರವಾಸೋದ್ಯಮ ಪಟ್ಟಿಗೆ ಸೇರಿಸಿ ಅಭಿವೃದ್ಧಿಪಡಿಸುವ ಬಗ್ಗೆ.
ಉತ್ತರಿಸುವವರು	:	ಮುಖ್ಯ ಮಂತ್ರಿ
ಉತ್ತರಿಸುವ ದಿನಾಂಕ	:	10-12-2020.

******

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ತಲಕಾಡನ್ನು ಪ್ರವಾಸೋದ್ಯಮ ಇಲಾಖೆಗೆ ಗುರುತಿಸಿರುವ ಐತಿಹಾಸಿಕ ಪ್ರವಾಸೋದ್ಯಮ ಸ್ಥಳಗಳ ಪ್ರವಾಸೋದ್ಯಮ ಪಟ್ಟಿಗೆ ಸೇರಿಸುವಂತೆ ಮನವಿ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಪ್ರವಾಸೋದ್ಯಮ ಇಲಾಖೆಯಿಂದ ಗುರುತಿಸಲ್ಪಟ್ಟ ಪ್ರವಾಸಿ ತಾಣಗಳ ಪಟ್ಟಿಯಲ್ಲಿ ತಲಕಾಡು ಸೇರಿರುತ್ತದೆ.
ಆ)	ತಲಕಾಡು, ಮುಡುಕುತೊರೆ, ಮಾಧವಮಂತ್ರಿ ಅಣೆಕಟ್ಟು, ಇವರುಗಳನ್ನು ಪ್ರವಾಸೋದ್ಯಮ ಪಟ್ಟಿಗೆ ಸೇರಿಸಿ ಅಭಿವೃದ್ಧಿಪಡಿಸಲು ಹಾಗೂ ಮಾಧವ ಮಂತ್ರಿ ಅಣೆಕಟ್ಟಿನಲ್ಲಿ ದೋಣಿ ವಿಹಾರ ಕೇಂದ್ರ ಆರಂಭಿಸಲು ಸರ್ಕಾರದಿಂದ ಕ್ರಮ ಜರುಗಿಸಲಾಗುವುದೇ:	2015-20ರ ಪ್ರವಾಸೋದ್ಯಮ ನೀತಿಯನ್ವಯ ಗುರುತಿಸಿರುವ 319 ಪ್ರವಾಸಿ ತಾಣಗಳ ಪಟ್ಟಿಯಲ್ಲಿ ತಲಕಾಡು ಸೇರ್ಪಡೆಯಾಗಿರುತ್ತದೆ. ಮುಡುಕುತೊರೆ ಮತ್ತು ಮಾಧವಮಂತ್ರಿ ಅಣೆಕಟ್ಟನ್ನು ಪ್ರವಾಸೋದ್ಯಮ ಇಲಾಖೆಯಿಂದ ಪ್ರವಾಸಿ ತಾಣಗಳೆಂದು ಗುರುತಿಸಿರುವುದಿಲ್ಲ. 2020-25ರ ನೀತಿಯನ್ವಯ ಪ್ರವಾಸಿ ತಾಣಗಳ ಪಟ್ಟಿಯ ಪರಿಶೀಲನಾ ಕಾರ್ಯ ಪ್ರಗತಿಯಲ್ಲಿದ್ದು, ಅಂತಿಮಗೊಳಿಸುವಾಗ ಇವುಗಳನ್ನು ಪರಿಶೀಲಿಸಲಾಗುವುದು. ಪ್ರಸ್ತುತ, ಮಾಧವಮಂತ್ರಿ ಅಣೆಕಟ್ಟಿನಲ್ಲಿ ದೋಣಿ ವಿಹಾರ ಕೇಂದ್ರ ಆರಂಭಿಸುವ ಸಂಬಂಧ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.
ಇ)	ಮುಡುಕುತೊರೆ ಮಲ್ಲಿಕಾರ್ಜುನ ದೇವಾಲಯದ ಪುನರ್ ನಿರ್ಮಾಣ ಕಾರ್ಯದಲ್ಲಿ ಅಲ್ಲಿರುವ ಪ್ರಾಚೀನ ವರ್ಣಚಿತ್ರಗಳಿಗೆ / ಶಿಲ್ಪಿಗಳಿಗೆ ಧಕ್ಕೆ ಆಗದಂತೆ ಎಚ್ಚರಿಕೆ ವಹಿಸಿ ಕಾಮಗಾರಿ ನಿರ್ವಹಿಸಲು ಕ್ರಮ ವಹಿಸಲಾಗುವುದೆ?	ಮುಡುಕುತೊರೆ ಶ್ರೀ ಮಲ್ಲಿಕಾರ್ಜುನ ದೇವಾಲಯವು ಧಾರ್ಮಿಕ ದತ್ತಿ ಇಲಾಖೆಗೆ ಒಳಪಟ್ಟಿರುತ್ತದೆ. ಮುಡುಕುತೊರೆ ಮಲ್ಲಿಕಾರ್ಜುನ ದೇವಾಲಯದ ಪುನರ್ ನಿರ್ಮಾಣದ ಸಂಬಂಧ ಪ್ರಸ್ತುತ ಇಡೀ ದೇವಾಲಯವನ್ನು ಪುನರ್ ನಿರ್ಮಾಣ ಮಾಡಲಾಗುತ್ತಿದ್ದು, ಈ ದೇವಾಲಯದ ಚಿತ್ರಕಲೆಯನ್ನು ಉಳಿಸಿಕೊಳ್ಳಲು ದೇವಾಲಯದ ಅಭಿವೃದ್ಧಿ ಸಮಿತಿಯ ಸಭೆಯಲ್ಲಿ ಚರ್ಚಿಸಿ, ತಜ್ಞ ತಾಂತ್ರಿಕ ಸಮಿತಿಯ ಸಲಹೆ ಪಡೆದುಕೊಂಡು ಸೂಕ್ತ ಕ್ರಮ ಕೈಗೊಳ್ಳಲಾಗುತ್ತದೆ.

ಸಂಖ್ಯೆ: ಟಿಆರ್ 248 ಟಿಡಿವಿ 2020

(ಬಿ.ಎಸ್. ಯಡಿಯೂರಪ್ಪ)
ಮುಖ್ಯ ಮಂತ್ರಿ